ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ    ದಿನಾಂಕ : DATE : 25/05/2019

### ಸುದ್ದಿಗೋಷ್ಠಿಯಲ್ಲಿ ಪಂಚಾಯತ್ ರಾಜ್ ಸಚಿವ ಕೃಷ್ಣಬೈರೇಗೌಡ ಸ್ಪಷ್ಟನೆ

# ಕೆಎಎಸ್ ಅಧಿಕಾರಿಗಳ ಸೇವಾ ಭದ್ರತೆಗೆ ವಿಶೇಷ ವಿಧೇಯಕಕ್ಕೆ ನಿರ್ಧಾರ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

1998ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಗೊಂಡ ಕೆಎಎಸ್ ಅಧಿಕಾರಿಗಳ ಪರಿಷ್ಕೃತ ಆಯ್ಕೆ ಪಟ್ಟಿಯಿಂದ ಅಧಿಕಾರಿಗಳಿಗೆ ಸೇವಾಭದ್ರತೆ ಸಿಗದಿರುವುದರಿಂದ ಸೇವಾಭದ್ರತೆ ಒದಗಿಸಲು ಸರಕಾರ ಜಾರಿಗೆ ತರಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

ಸಚಿವ ಸಂಪುಟ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನ್ಯಾಯಾಲಯದ ಆದೇಶದನ್ವಯ ನಡೆದುಕೊಂಡರೆ 28 ಅಧಿಕಾರಿಗಳನ್ನು ಹುದ್ದೆಯಿಂದ ತೆಗೆದುಹಾಕಬೇಕಾಗುತ್ತದೆ. ಇದರೊಂದಿಗೆ 115 ಅಧಿಕಾರಿಗಳನ್ನು ಸೇವಾ ಬದಲಾವಣೆಗೆ ಒಳಗಾಗಬೇಕಾಗುತ್ತದೆ. ಇವರಿಗೆ ಸೇವಾಭದ್ರತೆ ಒದಗಿಸಲು ಈ ವಿಧೇಯಕವನ್ನು ತರಲು ಉದ್ದೇಶಿಸಿದೆ ಎಂದು ತಿಳಿಸಿದರು.

ಇನ್ನು ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಕುರೇಕುಪ್ಪ ಜಿಂದಾಲ್ ಎಸ್ಡಬ್ಲ್ಯು ಸ್ಟೀಲ್ ಲಿಮಿಟೆಡ್ ಸಂಸ್ಥೆಗೆ 2000.58 ಎಕರೆ ಹಾಗೂ ಯರಬನಹಳ್ಳಿ ಗ್ರಾಮದ 1666.73 ಎಕರೆ ಸೇರಿ 3667 ಎಕರೆ ಜಮೀನನ್ನು ಗುತ್ತಿಗೆಯಿಂದ ಕ್ರಯಕ್ಕೆ ನೀಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಹಿಂದೆ ಜಮೀನನ್ನು 10 ವರ್ಷಗಳ ಗುತ್ತಿಗೆ ನೀಡಲಾಗಿತ್ತು. ಕರಾರು ಒಪ್ಪಂದದಂತೆ ಜಮೀನನ್ನು ಈಗ ಕ್ರಯಕ್ಕೆ ನೀಡಲು ಸಂಪುಟ ಸಭೆ ಒಪ್ಪಿಗೆ ನೀಡಿದೆ ಎಂದರು.

ಏಷಿಯಾದಲ್ಲಿ ಅತ್ಯಂತ ದೊಡ್ಡ ಸ್ಟೀಲ್ ಘಟಕವನ್ನು ಜಿಂದಾಲ್ ಸಂಸ್ಥೆ ಬಳ್ಳಾರಿಯ ಸಂಡೂರಿನಲ್ಲಿ ನಡೆಸುತ್ತಿದೆ. ಈ ಸಂಸ್ಥೆಗೆ ಕಾನೂನು ಪ್ರಕಾರ 10 ವರ್ಷಗಳ ನಂತರ ಗುತ್ತಿಗೆಯನ್ನು ಕ್ರಯವಾಗಿ ಮಾಡಿಕೊಡುವ ಒಡಂಬಡಿಕೆಯನ್ನು ಹಿಂದಿನ ಸರಕಾರ ಮಾಡಿಕೊಂಡಿತ್ತು. ಪ್ರತಿ ಎಕರೆಗೆ 90 ಸಾವಿರ ರು. ದರವನ್ನು ಅಂದಿನ ಬಿಜೆಪಿ ಸರಕಾರ ನಿಗದಿ ಮಾಡಿತ್ತು. ಅದರಂತೆ ಸರಕಾರಕ್ಕೆ 18 ಕೋಟಿ ರು. ಹಣವನ್ನು ಜಿಂದಾಲ್ ಸಂಸ್ಥೆ ಪಾವತಿಸಿದೆ. ಇದರಲ್ಲಿ ಅಕ್ರಮ ನಡೆದಿದೆ ಎಂದು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಆರೋಪಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಅಕ್ರಮ ನಡೆದಿದ್ದರೆ ಅವರ ಸರಕಾರದ ಅವಧಿಯಲ್ಲೇ ನಡೆದಿರಬೇಕು ಎಂದು ಹೇಳಿದರು.

### ಸಚಿವ ಸಂಪುಟ ಸಭೆಯ ಇತರ ಪ್ರಮುಖ ನಿರ್ಣಯಗಳು

- ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಖಾಲಿಯಿರುವ 358 ಗ್ರಾಮ ಪಂಚಾಯತ್ ಕಾರ್ಯದರ್ಶಿ, ಗ್ರೇಡ್ - ಐಐ ಹುದ್ದೆಗಳನ್ನು ತುಂಬಲು ಹಾಗೂ 95 ದ್ವಿತೀಯ ದರ್ಜೆ ಸಹಾಯಕರ ಹುದ್ದೆ ತುಂಬಲು ಅನುಮೋದನೆ ನೀಡಿದೆ.
- ವಿಕ್ಟೋರಿಯಾ ಆಸ್ಪತ್ರೆ ಆವರಣದಲ್ಲಿ 1000 ಹಾಸಿಗೆ ಸಾಮರ್ಥ್ಯದ ಹೆಚ್ಚುವರಿ ವಾರ್ಡ್ ನಿರ್ಮಾಣಕ್ಕೆ 59 ಕೋಟಿ ರು. ಆಡಳಿತಾತ್ಮಕ ಅನುಮೋದನೆ
- ವಿಜಯಪುರದಲ್ಲಿ ಬಿಎಲ್‌ಡಿಇ ಸಂಸ್ಥೆಯ ಬಿವಿವಿಎಸ್ ಆಯುರ್ವೇದ ಮಹಾವಿದ್ಯಾಲಯಕ್ಕೆ ಗುತ್ತಿಗೆ ನೀಡಿರುವ 12,584 ಚದರ ಯಾರ್ಡ್ ಜಮೀನನ್ನು ಸದರಿ ಸಂಸ್ಥೆಗೆ ಖಾಯಂ ಮಂಜೂರು ಮಾಡಲು ಒಪ್ಪಿಗೆ.
- ರಾಮನಗರ ಜಿಲ್ಲೆಯ ಸರಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ವಿವಿಧ ಮೂಲಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಗೆ 61.24 ಕೋಟಿ ರು. ಮಂಜೂರು
- ರಾಯಚೂರು ವಿಶ್ವವಿದ್ಯಾನಿಲಯದ ಸ್ಥಾಪನೆಗೆ 6.99 ಕೋಟಿ ರು. ಒದಗಿಸಲು ಅನುಮೋದನೆ.
- ಕೃಷ್ಣರಾಜಸಾಗರ ಅಣೆಕಟ್ಟೆಯ ಎಡಭಾಗದ ವಿಶ್ವೇಶ್ವರಯ್ಯ ನಾಲೆಯ ಮುಖ್ಯ ನಾಲೆ ಮತ್ತು ಶಾಖಾ ನಾಲೆಗಳನ್ನು ಶಿಥಿಲವಾಗಿರುವುದರಿಂದ ಇವುಗಳ ಅಭಿವೃದ್ಧಿ ಕಾಮಗಾರಿಗಾಗಿ 522..17 ಕೋಟಿ ರು.
- ಮೈಸೂರಿನಲ್ಲಿ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಶಾಖೆಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಹೆಚ್ಚುವರಿಯಾಗಿ 168.59 ಕೋಟಿ ರು.
- ಸಮಾಜ ಕಲ್ಯಾಣ ಇಲಾಖೆಯ ವಸತಿ ಶಿಕ್ಷಣ ಸಂಸ್ಥೆಗಳ 15 ಪರಿಶಿಷ್ಟ ಜಾತಿ ಮತ್ತು ಪಂಗಡದ ವಿವಿಧ ವಸತಿ ಶಾಲೆಗಳ ಕಟ್ಟಡದ ನಿರ್ಮಾಣಕ್ಕೆ 377.15 ಕೋಟಿ ರು.
- ಮದ್ದೂರು ಪಟ್ಟಣಕ್ಕೆ 2ನೇ ಹಂತದ ಒಳಚರಂಡಿ ಕಲ್ಪಿಸಲು 50.15 ಕೋಟಿ ರು.ಗಳ ಯೋಜನೆಗೆ ಸಚಿವ ಸಂಪುಟ ಸಭೆ ಒಪ್ಪಿಗೆ
- ಹೊಳೆನರಸೀಪುರ ತಾಲೂಕಿಗೆ ಸಮಗ್ರ ಕುಡಿಯುವ ನೀರು ಒದಗಿಸುವ ಯೋಜನೆಗೆ 62.45 ಕೋಟಿ ರು. ಕಾಮಗಾರಿಗೆ ಅನುಮೋದನೆ

## ಮೋಡ ಬಿತ್ತನೆಗೆ ಒಪ್ಪಿಗೆ



ರಾಜ್ಯದಲ್ಲಿ ಈ ಬಾರಿಯೂ ಮುಂಗಾರು ಕೈಕೊಡುವ ಸಾಧ್ಯತೆ ದಟ್ಟವಾಗಿರುವುದರಿಂದ, ಮೋಡ ಬಿತ್ತನೆಗೆ ಸರಕಾರ ಮುಂದಾಗಿದೆ. ಆದರೆ ಈ ಹಿಂದಿನ ಬಾರಿ ನಡೆಸಿದ ಮೋಡ ಬಿತ್ತನೆ ಕಾರ್ಯ ವಿಫಲವಾಗಿರುವುದರಿಂದ ಈ ಬಗ್ಗೆ ಪರ ವಿರೋಧ ಚರ್ಚೆಗಳು ಆರಂಭಗೊಂಡಿವೆ. ಸಂಪುಟ ಸಭೆಯಲ್ಲಿ ಬರ ಪೀಡಿತ ಜಿಲ್ಲೆಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮೋಡ ಬಿತ್ತನೆಗೆ ತೀರ್ಮಾನಿಸಲಾಗಿದೆ. 2019-20ರಲ್ಲಿ ಮೋಡ ಬಿತ್ತನೆ ಕಾರ್ಯಾಚರಣೆ ಕೈಗೊಳ್ಳಲು 2 ವಿಮಾನ ಹಾಗೂ 3 ರೇಡಾರ್‌ಗಳನ್ನು ಅಳವಡಿಸಿಕೊಳ್ಳಲು 93 ಕೋಟಿ ರು.ಗಳನ್ನು ವೆಚ್ಚ ಮಾಡಲು ನಿರ್ಧರಿಸಿದೆ. ಈಗಾಗಲೇ ಈ ಸಂಬಂಧ ಕೇಂದ್ರ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಸರಕಾರ ಕಡತಕ್ಕೆ ಅನುಮೋದನೆ ನೀಡಲು ಕನಿಷ್ಠ 45 ದಿನಗಳ ಕಾಲಾವಕಾಶ ಅಗತ್ಯವಿದೆ. ಆದ್ದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ಟೆಂಡರ್ ಕರೆಯಲಾಗಿದೆ. 2017ರಲ್ಲಿ ಮೋಡ ಬಿತ್ತನೆಯಿಂದಾಗಿ ರಾಜ್ಯದಲ್ಲಿ ಶೇ.27 ರಷ್ಟು ಮಳೆ ಪ್ರಮಾಣ ಹೆಚ್ಚಳವಾಗಿದೆ ಎಂದು ತಜ್ಞರು ವರದಿ ನೀಡಿದ್ದಾರೆ ಎಂದು ಮೋಡ ಬಿತ್ತನೆಯನ್ನು ಸಮರ್ಥಿಸಿಕೊಂಡರು.